# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1241 |
| ಸದಸ್ಯರ ಹೆಸರು : | ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 13.03.2026 |
| ಉತ್ತರಿಸುವ ಸಚಿವರು : | ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಅಭಿವೃದ್ಧಿ 2025-26ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿದ ಅನುದಾನ ಎಷ್ಟು; ಬಿಡುಗಡೆಯಾದ ಹಣವೆಷ್ಟು; ಪೂರ್ಣ ಹಣವನ್ನು ಬಿಡುಗಡೆ ಮಾಡಲಾಗಿದೆಯೇ; ಮಾಡದೇ ಇದ್ದಲ್ಲಿ, ಕಾರಣವೇನು: ಮಾಹಿತಿ ಒದಗಿಸುವುದು; | 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-206ರಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ ರೂ.100.00 ಕೋಟಿಗಳ ಅನುದಾನವನ್ನು ಘೋಷಿಸಲಾಗಿರುತ್ತದೆ. ಈ ಅನುದಾನದಲ್ಲಿ ಹಂತ-ಹಂತವಾಗಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ 30×40 ಅಡಿ ಅಳತೆಯ ನಿವೇಶನದಲ್ಲಿ 600 ಚ.ಅ. ವಿಸ್ತೀರ್ಣದಲ್ಲಿ ರೂ.10.00 ಲಕ್ಷಗಳ ಘಟಕ ವೆಚ್ಚದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ವಸತಿ ಸೌಲಭ್ಯವನ್ನು ಕಲ್ಪಿಸಲು ತುಮಕೂರು, ಕೊಪ್ಪಳ, ಕಲಬುರಗಿ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ನಿರ್ಮಿತಿ ಕೇಂದ್ರದ ಮೂಲಕ ಕಾಮಗಾರಿಗಳನ್ನು ಕೈಗೊಳ್ಳಲು ದಿನಾಂಕ:10.02.2026ರಂದು ಆದೇಶಿಸಲಾಗಿರುತ್ತದೆ.<br><br>ಅದರಂತೆ, 2025-26ನೇ ಸಾಲಿನಲ್ಲಿ ಒದಗಿಸಿರುವ ರೂ.30 ಕೋಟಿಗಳ ಅನುದಾನದಲ್ಲಿ ತುಮಕೂರು ಜಿಲ್ಲೆಯ ಸಿರಾ ತಾಲ್ಲೂಕಿನಲ್ಲಿ 20 ಎಕರೆ ಜಮೀನಿನಲ್ಲಿ ಮೊದಲ ಹಂತದಲ್ಲಿ ವಸತಿ ಸೌಲಭ್ಯವನ್ನು ಕಲ್ಪಿಸಲು ಮೂರು ಕಂತುಗಳ ಒಟ್ಟು ರೂ.22.50 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. 4ನೇ ಕಂತಿನ ರೂ.7.50 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವುದು ಬಾಕಿ ಇರುತ್ತದೆ. |
| ಆ) | ನಿಗದಿತ ಉದ್ದೇಶಕ್ಕೆ ಬಿಡುಗಡೆಯಾದ ಹಣವನ್ನು ಬೇರೆ-ಬೇರೆ ಯೋಜನೆಗಳಿಗೆ ವಿನಿಯೋಗಿಸಲು ಅವಕಾಶವಿದೆಯೇ; ವಿನಿಯೋಗಿಸಿದ್ದಲ್ಲಿ, ಯಾವ ಯೋಜನೆಗಳಿಗೆ ವಿನಿಯೋಗಿಸಲಾಗಿದೆ; ವಿವರವಾದ ಮಾಹಿತಿ ನೀಡುವುದು; | 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-206ರಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ ರೂ.100.00 ಕೋಟಿಗಳ ಅನುದಾನವನ್ನು ಘೋಷಿಸಿದ್ದು, 2025-26ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿ ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರಿಗಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನೊಳಗೊಂಡಂತೆ ವಸತಿ ಸೌಲಭ್ಯವನ್ನು ಕಲ್ಪಿಸಲು ತುಮಕೂರು, ಕೊಪ್ಪಳ, ಕಲಬುರಗಿ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಆದೇಶಿಸಲಾಗಿರುತ್ತದೆ. ಅದರಂತೆ ನಿಗಧಿತ ಉದ್ದೇಶಕ್ಕೆ ಬಿಡುಗಡೆಯಾದ ಅನುದಾನವನ್ನು ಅದೇ ಉದ್ದೇಶಕ್ಕೆ ಮಾತ್ರ ವಿನಿಯೋಗಿಸಲಾಗುತ್ತದೆ. |
| ಇ) | ಅನ್ಯ ಉದ್ದೇಶಕ್ಕೆ ಬಳಸಿದರೆ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗೆ ಅನ್ಯಾಯವಾಗುವುದಿಲ್ಲವೇ; ಈ ಅನ್ಯಾಯವನ್ನು ಸರ್ಕಾರವು ಹೇಗೆ ಸರಿಪಡಿಸಲು ಕ್ರಮವಹಿಸುವುದು? | |

**ಸಂಖ್ಯೆ:ಹಿಂವಕ 212 ಬಿಎಂಎಸ್ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು